ಶ್ರೀ ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):- ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳು(ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು:- ಪ್ರಸ್ತಾವನೆ ಮಂಡಿಸಲಾಯಿತು.

ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ, **2011 ನೇ ಸಾಲಿನ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳು (ಎರಡನೇ ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು.**

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

ಅಧ್ಯಕ್ಷರು:- ಈಗ ಸದನವನ್ನು ಅನಿರ್ದಿಷ್ಟ ಕಾಲದವರೆಗೆ ಮುಂದೂಡಲಾಗಿದೆ.

(ಸದನವು ಮಧ್ಯಾಹ್ನ 1 ಗಂಟೆ 25 ನಿಮಿಷಕ್ಕೆ ಮುಕ್ತಾಯಗೊಂಡು, ಅನಿರ್ದಿಷ್ಟ ಕಾಲದವರೆಗೆ ಮುಂದೂಡಲಾಯಿತು)

ಅನುಬಂಧ-I

ಗ್ರಾಮ ಪಂಚಾಯ್ತಿಗಳನ್ನು ಮೇಲ್ದರ್ಜೆಗೇರಿಸುವುದು

16 (174) ಶ್ರೀ ಖಾದರ್ ಯು.ಟಿ (ಮಂಗಳೂರು):- ಮಾನ್ಯ ನಗರಾಭಿವೃದ್ಧಿ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಬೆಂಗಳೂರು ಜಲಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ರಾಜ್ಯದಲ್ಲಿರುವ 10,000ಕ್ಕೂ ಹೆಚ್ಚು ಜನಸಂಖ್ಯೆಯ ಗ್ರಾಮ ಪಂಚಾಯ್ತಿಗಳನ್ನು ಮೇಲ್ದರ್ಜೆಗೇರಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

ಆ) ಹಾಗಿದ್ದಲ್ಲಿ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಈ ರೀತಿ ಎಷ್ಟು ಗ್ರಾಮ ಪಂಚಾಯ್ತಿಗಳನ್ನು ಮೇಲ್ದರ್ಜೆಗೇರಿಸಲಾಗಿದೆ (ವಿವರ ನೀಡುವುದು);

ಇ) ಮಂಗಳೂರು ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಸೋಮೇಶ್ವರ ಮತ್ತು ಪುದುಗ್ರಾಮ ಪಂಚಾಯ್ತಿಗಳಲ್ಲಿ 20,000ಕ್ಕೂ ಹೆಚ್ಚಿನ ಜನಸಂಖ್ಯೆ ಇದ್ದರೂ ಇವುಗಳನ್ನು ಮೇಲ್ದರ್ಜೆಗೇರಿಸದೇ ಇರಲು ಕಾರಣವೇನು;

ಈ) ಈ ಗ್ರಾಮ ಪಂಚಾಯ್ತಿಗಳನ್ನು ಎಂದಿನಿಂದ ಮೇಲ್ದರ್ಜೆಗೇರಿಸಲಾಗುವುದು.

ಶ್ರೀ ಎಸ್.ಸುರೇಶ್ ಕುಮಾರ್ (ಮಾನ್ಯ ನಗರಾಭಿವೃದ್ಧಿ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಬೆಂಗಳೂರು ಜಲಮಂಡಳಿ ಸಚಿವರು):–

ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯವರು ಕರ್ನಾಟಕ ಪುರಸಭೆ ಕಾಯ್ದೆ, 1964ರ ಕಲಂ 3 ಮತ್ತು 349 ರನ್ವಯ 10,000ಕ್ಕಿಂತ ಹೆಚ್ಚು ಜನಸಂಖ್ಯೆ ಹೊಂದಿರುವ ಒಟ್ಟು 247 ಗ್ರಾಮ ಪಂಚಾಯತಿಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ ಪ್ರಸ್ತಾವನೆಯನ್ನು ನಗರಾಭಿವೃದ್ಧಿ ಇಲಾಖೆಗೆ ಕಳುಹಿಸಿರುತ್ತಾರೆ. ಸರ್ಕಾರದ ಆದೇಶ ಸಂಖ್ಯೆ:ಆರ್‌ಡಿ 70ರಲ್ಲಿ ಭೂದಪು 2009 ದಿನಾಂಕ:24–12–2009ರಲ್ಲಿ ನಗರ ಸ್ಥಳೀಯ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ ನಿರ್ಭಧಿಸಲಾಗಿದೆ. ಜನಗಣತಿ ನಿರ್ದೇಶನಾಲಯದಿಂದ 2011ರ ಜನಗಣತಿ ವರದಿ ಬಂದ ನಂತರ ನಗರ ಸ್ಥಳೀಯ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ ಕರ್ನಾಟಕ ಪುರಸಭೆ ಕಾಯ್ದೆ 1964ರ ಕಲಂ 3, 9 ಮತ್ತು 349ರನ್ವಯ ಪರಿಶೀಲಿಸಲಾಗುವುದು.

ಆ) –ಮೇಲಿನಂತೆ–

ವಸತಿ ಯೋಜನೆಗಳ ಅನುಷ್ಠಾನ

20 (69) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ರಾಜ್ಯದಲ್ಲಿ ಕಳೆದ ಮೂರು ವರ್ಷದ ಅವಧಿಯಲ್ಲಿ (ದಿನಾಂಕ:30/04/2011ರವರೆಗೆ) ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿವಿಧ ಯೋಜನೆಗಳ ಅಡಿಯಲ್ಲಿ ಪ್ರತಿ ಜಿಲ್ಲೆಯಲ್ಲಿ ಎಷ್ಟು ಮನೆಗಳನ್ನು ನಿರ್ಮಿಸುವ ಗುರಿಯನ್ನು ಹೊಂದಲಾಗಿತ್ತು (ಪೂರ್ಣ ವಿವರಗಳನ್ನು ಒದಗಿಸುವುದು)